154ನೆ6 ನಿ-72-(22)
4RK
3008

**ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಎಸ್.ವ್ಹಿ. ಸಂಕನೂರ ಇವರು ನಿಯಮ 72ರಡಿ ಪ್ರಸ್ತಾಪಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ;**

**ವಿಷಯ:** ರಾಜ್ಯದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಶುಶ್ರೂಷಕ ಅಧಿಕಾರಿ/ಗ್ರೂಪ್ ಡಿ ಅವರಿಗೆ ಕೋವಿಡ್-19 ರಿಸ್ಕ್ ಭತ್ಯೆ ನೀಡಿದಂತೆ, ಸರಕಾರಿ ಮೆಡಿಕಲ್ ಕಾಲೇಜುಗಳ ಆಸ್ಪತ್ರೆಗಳಲ್ಲಿ ಕಾರ್ಯನಿರ್ವಹಿಸಿದ ಸಿಬ್ಬಂದಿಗೆ ನೀಡದೇ ಅನ್ಯಾಯಮಾಡಿ ತಾರತಮ್ಯ ನೀತಿ ಅನುಸರಿಸಿದ ಬಗ್ಗೆ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯುವದು.

******

ವೈದ್ಯಕೀಯ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ವೈದ್ಯಕೀಯ ಸಂಸ್ಥೆಗಳಲ್ಲಿ ಕೋವಿಡ್ - 19 (ಕೊರೋನ ವೈರಸ್) ನಿಯಂತ್ರಿಸುವ ಸಮಯದಲ್ಲಿ ಪಿಪಿಇ ಕಿಟ್ ಧರಿಸಿ (The Nurse who are working in Covid - 19 ward wearing PPE) ಗುತ್ತಿಗೆ, ಹೊರಗುತ್ತಿಗೆ ಹಾಗೂ ಸ್ವೈಘಂಡರಿ ಆಧಾರದ ಮೇಲೆ ಕೆಲಸ ನಿರ್ವಹಿಸಿರುವ ಶುಶೂಷಕರುಗಳಿಗೆ ಮಾತ್ರ ಕರ್ತವ್ಯದ ಒಂದು ಭಾಗವಾಗಿ ಸರ್ಕಾರದ ಆದೇಶ ಸಂಖ್ಯೆ: ಎಂಇಡಿ 104 ಆರ್ಐ 2020, ದಿನಾಂಕ : 27.08.2020ರನ್ವಯ ರೂ.5000/- (ಐದು ಸಾವಿರಗಳು ಮಾತ್ರ) ಗಳನ್ನು ಮತ್ತು ಸರ್ಕಾರದ ಆದೇಶ ಸಂಖ್ಯೆ:ಎಂಇಡಿ 265 ಎಂಪಿಎಸ್ 2021, ದಿನಾಂಕ:06.05.2021ರಲ್ಲಿ ರೂ.8,000/-ಗಳನ್ನು ಕೋವಿಡ್ ರಿಸ್ಕ್ ಪ್ರೋತ್ಸಾಹ ಧನವನ್ನು ನೀಡಲಾಗಿರುತ್ತದೆ.

ಸರ್ಕಾರದ ಆದೇಶ ಸಂಖ್ಯೆ : ಆಕುಕ 01 ಸಿ&ಆರ್ 2020, ದಿನಾಂಕ:14.07.2020ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಆದೇಶದನ್ವಯ ವೈದ್ಯಕೀಯ ಶಿಕ್ಷಣ ಇಲಾಖೆಯಡಿ ಬರುವ ಕೋವಿಡ್ ಹೆಲ್ತ್ ಸೆಂಟರ್, ಕೋವಿಡ್ ಆಸ್ಪತ್ರೆ ಮತ್ತು ಕೋವಿಡ್ ಕೇರ್ ಸೆಂಟರ್‌ಗಳಲ್ಲಿ ಪಿಪಿಇ ಕಿಟ್ ಧರಿಸಿ ಕಾರ್ಯನಿರ್ವಹಿಸಿದ ಗ್ರೂಪ್ ಡಿ ನೌಕರರುಗಳಿಗೆ ಮಾಸಿಕ ರೂ.10,000/- (ಹತ್ತು ಸಾವಿರ ರೂಪಾಯಿಗಳು ಮಾತ್ರ)ಗಳ ಕೋವಿಡ್ ರಿಸ್ಕ್ ಪ್ರೋತ್ಸಾಹ ಧನವನ್ನು ಪಾವತಿಸಲಾಗಿದೆ.

**ಸಂಖ್ಯೆ**:ಎಂಇಡಿ 746 ಎಂಪಿಎಸ್ 2024

**(ಡಾ. ಶರಣಪ್ರಕಾಶ ಆರ್. ಪಾಟೀಲ್)**
ವೈದ್ಯಕೀಯ ಶಿಕ್ಷಣ ಹಾಗೂ
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಸಚಿವರು.